ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ, ಯಾದಗಿರಿ.

ಸಿ.ಸಿ ನಂಃ **352/2020**

| | | |
|---|---|---|
| ಸಾಕ್ಷಿಯ ಹೆಸರುಃ | ಶ್ವೇತಾ | ಪ್ರಾಸಾಃ 11 |
| ಗಂಡನ/ತಂದೆಯ ಹೆಸರುಃ | ವಿರೇಶ | ಚಾಸಾಃ 16 |
| ವಯಸ್ಸುಃ | 38 ವರ್ಷ | ದಿಃ 17-03-2026 |
| ಉದ್ಯೋಗಃ | ವೈದ್ಯಾದಿಕಾರಿ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಯಾದಗಿರಿ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ

ನಾನು ಸನಃ ಸೆಪ್ಟೆಂಬರ 2016 ರಿಂದ ಇಲ್ಲಿಯವರೆಗೆ ಯಾದಗಿರಿ ಸರಕಾರಿ ಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿ ಎಂದು ಕೆಲಸ ನಿರ್ವಹಿಸುತ್ತಿದ್ದೇನೆ.

ದಿನಾಂಕಃ 26-02-2020 ರಂದು ರಾತ್ರಿ 7.04 ಗಂಟೆ ಸುಮಾರಿಗೆ ಚಾಸಾಃ 12 ರವರು ಆಸ್ಪತ್ರೆಗೆ ಬಂದಿರುತ್ತಾರೆ. ಸದರಿ ಚಾಸಾಃ 12 ರವರು ಅಪಘಾತದ ಹಿನ್ನೆಲೆಯಲ್ಲಿ ಆಸ್ಪತ್ರೆಗೆ ಬಂದಿರುತ್ತಾರೆ. ಸದರಿ ಚಾಸಾಃ 12 ರವರಿಗೆ ಚಿಕಿತ್ಸೆಗೆ ಒಳಪಡಿಸಿದಾಗ ಚಾಸಾಃ 12 ರವರ ಎರಡೂ ಕಾಲು ಮತ್ತು ಕೈಗಳಿಗೆ ತರಚಿದ ಗಾಯವಾಗಿರುತ್ತದೆ ಮತ್ತು ಬಲಗಾಲಿಗೆ ಬಾವು ಬಂದಿರುತ್ತದೆ. ಸದರಿ ಗಾಯಗಳು ಸಾದಾ ಗಾಯಗಳು ಆಗಿರುತ್ತವೆ. ಸಾಕ್ಷಿಗೆ ಗಾಯದ ಪ್ರಮಾಣ ಪತ್ರವನ್ನು ತೋರಿಸಲಾಗಿ ಅದನ್ನು ಸಾಕ್ಷಿಯು ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-20 ಎಂದು ಮತ್ತು ತನ್ನ ಸಹಿಯನ್ನು ನಿಪಿ-20(ಎ) ಎಂದು ಗುರುತಿಸಲಾಯಿತು.

ಪಾಟಿ ಸವಾಲು ಃಆರೋಪಿ ಪರ ಶ್ರೀ. ಎಸ್. ಬಿ ವಕೀಲರಿಂದ

1. ಸದರಿ ಗಿಡದ ಮೇಲಿಂದ ಬಿದ್ದರೆ ಈ ರೀತಿ ಗಾಯಗಳು ಆಗುವ ಸಾದ್ಯತೆ ಇರುತ್ತದೆ ಎಂದರೆ ಸರಿ. ಸದರಿ ಚಾಸಾಃ 19 ರವರ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸುಳ್ಳು ಗಾಯದ ಪ್ರಮಾಣ ಪತ್ರವನ್ನು ನೀಡಿ ಸುಳ್ಳು ಸಾಕ್ಷಿ ನುಡಿಯತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಃ ಇರುವುದಿಲ್ಲ.

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ